9	ಕಂಪ್ಲಿ	ಬಳ್ಳಾರಿ	20	ಚನ್ನಸಂದ್ರ	ಬೆಂ.ನಗರ
10	ಹರಪನಹಳ್ಳಿ	ದಾವಣಗೆರೆ	21	ದೇವದುರ್ಗ	ರಾಯಚೂರು
11	ಕೂಡ್ಲಿಗಿ	ಬಳ್ಳಾರಿ	22	ಬಂಕಾಪುರ	ಹಾವೇರಿ

ವೈದ್ಯರ/ ಇತರೆ ಸಿಬ್ಬಂದಿಗಳ ಕೊರತೆ

603 (569) ಶ್ರೀ ಶ್ರೀನಿವಾಸ್ (ವಾಸು) ಎಸ್.ಆರ್. (ಗುಬ್ಬಿ) : ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಗುಬ್ಬಿ ತಾಲ್ಲೂಕಿನಲ್ಲಿರುವ ಸಾರ್ವಜನಿಕ ಆಸ್ಪತ್ರೆ ಮತ್ತು ಪ್ರಾಥಮಿಕ ಆರೋಗ್ಯ ಕೇಂದ್ರಗಳ ಸಂಖ್ಯೆ ಎಷ್ಟು; ಯಾವುವು ಎಲ್ಲಿವೆ (ವಿವರ ನೀಡುವುದು);

ಆ) ಮೇಲ್ಕಂಡ ಆಸ್ಪತ್ರೆಗಳಲ್ಲಿ ವೈದ್ಯರ ಹಾಗೂ ಇತರೆ ಸಿಬ್ಬಂದಿಗಳ ಕೊರತೆಯಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ;

ಇ) ಕೊರತೆಯಿರುವ ವೈದ್ಯರು ಹಾಗೂ ಇತರೆ ಸಿಬ್ಬಂದಿಗಳನ್ನು ತುಂಬದೇ ಇರುವುದರಿಂದ ಗ್ರಾಮೀಣ ಭಾಗದ ಜನರಿಗೆ ತೊಂದರೆಯಾಗುತ್ತಿರುವುದು ನಿಜವೇ;

ಈ) ಹಾಗಿದ್ದಲ್ಲಿ, ಕೊರತೆಯಿರುವ ವೈದ್ಯರು ಹಾಗೂ ಸಿಬ್ಬಂದಿಗಳನ್ನು ತುಂಬಲು ಸರ್ಕಾರ ಕೈಗೊಂಡ ಕ್ರಮಗಳೇನು; ಯಾವಾಗ ತುಂಬಲಾಗುವುದು (ವಿವರ ನೀಡುವುದು);

ಶ್ರೀ ಅರವಿಂದ ಲಿಂಬಾವಳಿ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು) :

ಅ) ಗುಬ್ಬಿ ತಾಲ್ಲೂಕಿನಲ್ಲಿ ಒಂದು ಸಾರ್ವಜನಿಕ ಆಸ್ಪತ್ರೆ ಮತ್ತು 19 ಪ್ರಾಥಮಿಕ ಆರೋಗ್ಯ ಕೇಂದ್ರಗಳು ಕಾರ್ಯನಿರ್ವಹಿಸುತ್ತಿವೆ.

ಗುಬ್ಬಿ ತಾಲ್ಲೂಕಿನ ಪ್ರಾಥಮಿಕ ಆರೋಗ್ಯ ಕೇಂದ್ರಗಳು	
1	ಅಳಿಲಘಟ್ಟ
2	ಚೆಳೂರು
3	ಬಿದರೆ
4	ಚಂದ್ರಶೇಖರಪುರ

5	ಅದಲಗೆರೆ
6	ಕಡಬ
7	ಹೊಸಕೆರೆ
8	ದೊಡ್ಡಚೆಂಗಾವಿ
9	ತಿಪ್ಪೂರು
10	ಕಲ್ಲೂರು
11	ಮಾವಿನಹಳ್ಳಿ
12	ನಿಟ್ಟೂರು
13	ಚಿಕ್ಕಕುನ್ನಾಲ
14	ತ್ಯಾಗಟೂರು
15	ಹಾಗಲವಾಡಿ
16	ಇಡಗೂರು
17	ಸೋಮಲಾಪುರ
18	ಹುರಳಗೆರೆ
19	ದೊಡ್ಡಗುಣಿ

ಆ) ಸಾರ್ವಜನಿಕ ಆಸ್ಪತ್ರೆ, ಗುಬ್ಬಿಯಲ್ಲಿ 12 ತಜ್ಞ ವೈದ್ಯರ ಹುದ್ದೆಗಳು ಮಂಜೂರಾಗಿದ್ದು, 10 ತಜ್ಞರು ಕರ್ತವ್ಯ ನಿರ್ವಹಿಸುತ್ತಿದ್ದು, 2 ತಜ್ಞ ವೈದ್ಯರ ಹುದ್ದೆ ಖಾಲಿ ಇದೆ ಹಾಗೂ 73 ಇತರೆ ವೃಂದದ ಹುದ್ದೆಗಳು ಮಂಜೂ ರಾಗಿದ್ದು 24 ಸಿಬ್ಬಂದಿ ವರ್ಗದವರು ಕರ್ತವ್ಯ ನಿರ್ವಹಿಸುತ್ತಿದ್ದು, 49 ಹುದ್ದೆಗಳು ಖಾಲಿ ಇವೆ.

ಗುಬ್ಬಿ ತಾಲ್ಲೂಕಿನ 19 ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ 20 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳ ಹುದ್ದೆ ಮಂಜೂರಾಗಿದ್ದು, ಈ ಪೈಕಿ 15 ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದು 5 ವೈದ್ಯರ ಹುದ್ದೆ ಖಾಲಿ ಇವೆ ಹಾಗೂ 212 ಇತರೆ ವೃಂದದ ಹುದ್ದೆಗಳು ಮಂಜೂರಾಗಿದ್ದು 141 ಸಿಬ್ಬಂದಿ ವರ್ಗದವರು ಕರ್ತವ್ಯ ನಿರ್ವಹಿಸುತ್ತಿದ್ದು, 71 ಹುದ್ದೆಗಳು ಖಾಲಿ ಇವೆ.

ಇ) ಲಭ್ಯವಿರುವ ವೈದ್ಯರು ಹಾಗೂ ಇತರೆ ಸಿಬ್ಬಂದಿಗಳಿಂದ ರೋಗಿ ಗಳಿಗೆ ತೊಂದರೆಯಾಗದಂತೆ ಚಿಕಿತ್ಸೆ ನೀಡಲಾಗುತ್ತಿದೆ.

ಈ) ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ಆಸ್ಪತ್ರೆಗಳು/ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯಾಧಿಕಾರಿಗಳು ಮತ್ತು ಸಿಬ್ಬಂದಿಯ ಹುದ್ದೆಗಳನ್ನು ತುಂಬಲು ಸರ್ಕಾರ ಕೈಗೊಂಡಿರುವ ಕ್ರಮದ ವಿವರಗಳನ್ನು ಅನುಬಂಧದಲ್ಲಿ ನೀಡಲಾಗಿದೆ.

ಪ್ರಶ್ನೆ ಸಂಖ್ಯೆ 569ಕ್ಕೆ ಅನುಬಂಧ

ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆಯ ವ್ಯಾಪ್ತಿಯಡಿ ಬರುವ ಸರ್ಕಾರಿ ಆಸ್ಪತ್ರೆಗಳಲ್ಲಿ ಖಾಲಿಯಿರುವ ತಜ್ಞ ವೈದ್ಯರ, ವೈದ್ಯರ ಮತ್ತು ಇತರೆ ಸಿಬ್ಬಂದಿ ಹುದ್ದೆಗಳನ್ನು ತುಂಬಲು ತೆಗೆದುಕೊಂಡ ಕ್ರಮಗಳ ವಿವರಗಳು :

1) ರಾಷ್ಟ್ರೀಯ ಗ್ರಾಮೀಣ ಆರೋಗ್ಯ ಅಭಿಯಾನ (ಎನ್.ಆರ್. ಹೆಚ್.ಎಂ) ಅಡಿಯಲ್ಲಿ ಸ್ತ್ರೀರೋಗ ತಜ್ಞತೆ, ಅರವಳಿಕೆ ಹಾಗೂ ಮಕ್ಕಳ ತಜ್ಞತೆಯಲ್ಲಿ ಗೌರವಧನದ ಆಧಾರದ ಮೇಲೆ ತಜ್ಞ ವೈದ್ಯರನ್ನು ನೇಮಿಸಿಕೊಳ್ಳಲು ಸಿ-ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ರೂ.80,000 ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ರೂ.60,000 ದಂತೆ ನೀಡಲು ಅವಕಾಶ ಕಲ್ಪಿಸಲಾಗಿದೆ.
2) ಕೆ.ಹೆಚ್.ಎಸ್.ಡಿ. ಆರ್.ಪಿ ಯೋಜನೆಯಡಿಯಲ್ಲಿ ಇತರೆ ತಜ್ಞತೆಗಳಿಗೆ (ಮಕ್ಕಳ ತಜ್ಞರು, ಸ್ತ್ರೀರೋಗ ತಜ್ಞರು ಹಾಗೂ ಅರವಳಿಕೆ ತಜ್ಞರನ್ನು ಹೊರತುಪಡಿಸಿ) ಸಂಬಂಧಪಟ್ಟಂತೆ, ಮೇಲೆ ತಿಳಿಸಿದ ಜಿಲ್ಲೆಗಳಲ್ಲಿ ಕ್ರಮವಾಗಿ ಮಾಸಿಕ ರೂ.65,000 ಹಾಗೂ ರೂ.50,000 ದಂತೆ ಗೌರವಧನ ನೀಡಲಾಗುತ್ತಿದೆ. ಮುಂದುವರೆದು, ರೀಟೈನರ್ ಷಿಪ್ ಆಧಾರದಲ್ಲಿ ನೇಮಕ ಮಾಡುವ ಎಲ್ಲಾ ತಜ್ಞ ವೈದ್ಯರಿಗೆ ಸಂಬಂಧಿಸಿದಂತೆ ನೀಡಲಾಗುತ್ತಿದ್ದ ಗೌರವಧನವನ್ನು ಸಿ-ಗುಂಪಿನ ಜಿಲ್ಲೆಗಳು ಹಾಗೂ ಉತ್ತರ ಕನ್ನಡ, ಕೊಡಗು ಮತ್ತು ಬಳ್ಳಾರಿ ಜಿಲ್ಲೆಗಳಿಗೆ ಅನ್ವಯಿಸುವಂತೆ ಮಾಸಿಕ ರೂ.5,000 ದಿಂದ ರೂ. 10,000 ಕ್ಕೆ ಹೆಚ್ಚಿಸಿ ಹಾಗೂ ಇತರೆ ಎಲ್ಲಾ ಜಿಲ್ಲೆಗಳಿಗೆ ರೂ.8,000 ದಂತೆ ನೀಡಿ ನೇಮಿಸಿಕೊಳ್ಳಲು ಅವಕಾಶ ಕಲ್ಪಿಸಲಾಗಿದೆ. ಮುಂದುವರೆದು, ಸದರಿ ತಜ್ಞರು ಹೊರ ರೋಗಿ ವಿಭಾಗದಲ್ಲಿ ಕಾರ್ಯ

ನಿರ್ವಹಿಸಿದ್ದಲ್ಲಿ ದಿನವೊಂದಕ್ಕೆ ರೂ.1,000 ದಂತೆ ಗೌರವ ಧನ ನೀಡಲು ಅವಕಾಶ ಕಲ್ಪಿಸಲಾಗಿದೆ.

3) ಮೇಲೆ ತಿಳಿಸಿದಂತೆ ಎನ್.ಆರ್.ಹೆಚ್.ಎಂ. / ಕೆ.ಹೆಚ್.ಎಸ್. ಡಿ.ಆರ್.ಪಿ. ಅಡಿಯಲ್ಲಿ ಅವಕಾಶಗಳನ್ನು ಕಲ್ಪಿಸಿದ್ದಾಗ್ಯೂ, ಎನ್.ಆರ್. ಹೆಚ್.ಎಂ. ಅಡಿಯಲ್ಲಿ ಕೇವಲ 125 ಹಾಗೂ ಕೆ.ಹೆಚ್. ಎಸ್. ಡಿ.ಆರ್.ಪಿ. ಅಡಿಯಲ್ಲಿ ಕೇವಲ 49 ವಿವಿಧ ತಜ್ಞತೆ ಹೊಂದಿರುವ ವೈದ್ಯರು ಕರ್ತವ್ಯ ನಿರ್ವಹಿಸುತ್ತಿದ್ದಾರೆ. ಒಟ್ಟಾರೆ, ಸರ್ಕಾರಿ ಆಸ್ಪತ್ರೆ/ ಕೇಂದ್ರಗಳಲ್ಲಿ ತಜ್ಞ ವೈದ್ಯರು ಕರ್ತವ್ಯ ನಿರ್ವಹಿಸಲು ಮುಂದೆ ಬರುತ್ತಿರುವವರ ಸಂಖ್ಯೆ ಉತ್ತೇಜನಕಾರಿಯಾಗಿಲ್ಲ.

4) ಎಂ.ಬಿ.ಬಿ.ಎಸ್. ವೈದ್ಯರಿಗೆ ಅರವಳಿಕೆ ಹಾಗೂ ಸಿಜೇರಿಯನ್ ಶಸ್ತ್ರ ಚಿಕಿತ್ಸೆಗಳಿಗೆ ತರಬೇತಿ ನೀಡಲಾಗುತ್ತಿದ್ದು, ಈ ಮೂಲಕ ಸ್ತ್ರೀರೋಗ ಹಾಗೂ ಅರವಳಿಕೆ ತಜ್ಞರ ಕೊರತೆಯನ್ನು ನೀಗಿಸಲು ಕ್ರಮವಹಿ ಸಲಾಗಿದೆ.

5) ಕರ್ನಾಟಕ ಲೋಕಸೇವಾ ಆಯೋಗದ ಮೂಲಕ 600 ತಜ್ಞ ವೈದ್ಯರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಇತ್ತೀಚೆಗೆ ಕ್ರಮ ಕೈಗೊಳ್ಳಲಾಗಿ ಒಟ್ಟು 252 ಅಭ್ಯರ್ಥಿಗಳು ಅರ್ಜಿ ಸಲ್ಲಿಸಿದ್ದರು. ಆಯ್ಕೆಯಾದ ಎಲ್ಲಾ 252 ಅಭ್ಯರ್ಥಿಗಳಿಗೆ ಕೌನ್ಸಿಲಿಂಗ್ ಮೂಲಕ ಸ್ಥಳನಿಯುಕ್ತಿ ಮಾಡಲು ಕ್ರಮ ಕೈಗೊಳ್ಳಲಾಗಿ, ಕೇವಲ 137 ಅಭ್ಯರ್ಥಿಗಳು ಸ್ಥಳ ಆಯ್ಕೆ ಮಾಡಿಕೊಂಡರು. ಆ ಪೈಕಿ ಕೇವಲ 75 ಅಭ್ಯರ್ಥಿಗಳು ಮಾತ್ರ ಕಾರ್ಯವರದಿ ಮಾಡಿಕೊಂಡಿದ್ದಾರೆ.

6) ಪ್ರಾಥಮಿಕ ಆರೋಗ್ಯ ಕೇಂದ್ರಗಳಲ್ಲಿ ಖಾಲಿ ಇರುವ ವೈದ್ಯರ ಹುದ್ದೆಗಳನ್ನು ಭರ್ತಿ ಮಾಡುವ ಸಲುವಾಗಿ ದಿನಾಂಕ: 07.01.2012 ರಂದು 332 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು ಜಿಲ್ಲಾಧಿಕಾರಿಗಳಿಗೆ ಸರ್ಕಾರವು ಅನುಮತಿ ನೀಡಿತ್ತು. ಈ ಪೈಕಿ 58 ವೈದ್ಯರುಗಳು ಗುತ್ತಿಗೆ ಆಧಾರದ ಮೇಲೆ ನೇಮಕ ಹೊಂದಿರುತ್ತಾರೆ. ತದನಂತರ ದಿನಾಂಕ: 27.06.2012 ರಂದು 155 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು ಜಿಲ್ಲಾಧಿಕಾರಿಗಳಿಗೆ ಸರ್ಕಾರವು ಅನುಮತಿ ನೀಡಿತ್ತು. ಈ ಪೈಕಿ 40 ವೈದ್ಯರುಗಳು ಗುತ್ತಿಗೆ ಆಧಾರದ ಮೇಲೆ ನೇಮಕ ಹೊಂದಿರುತ್ತಾರೆ ಹಾಗೂ

ದಿನಾಂಕ: 19.10.2012 ರಲ್ಲಿ 217 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ಗುತ್ತಿಗೆ ಆಧಾರದ ಮೇಲೆ ನೇಮಿಸಲು ಜಿಲ್ಲಾಧಿಕಾರಿಗಳಿಗೆ ಸರ್ಕಾರವು ಅನುಮತಿ ನೀಡಲಾಗಿದೆ. ನೇಮಕಾತಿ ಪ್ರಕ್ರಿಯೆ ಜಾರಿಯಲ್ಲಿದೆ.

7) ಮುಂದುವರೆದು, ಸರ್ಕಾರಿ ಕೋಟಾದಡಿ ಎಂಬಿಬಿಎಸ್ ಪ್ರವೇಶ ಪಡೆದು, ವ್ಯಾಸಂಗ ಮುಗಿಸಿದ ನಂತರ ಕಡ್ಡಾಯವಾಗಿ ಒಂದು ವರ್ಷ ಗ್ರಾಮೀಣ ಪ್ರದೇಶದಲ್ಲಿ ಸೇವೆ ಸಲ್ಲಿಸಲು ಬಾಂಡ್ ಬರೆದು ಕೊಟ್ಟಿದ್ದ 111 ವೈದ್ಯರಿಗೆ ಹಾಗೂ ಸ್ನಾತಕೋತ್ತರ ವ್ಯಾಸಂಗ ಮುಗಿಸಿ ಬಂದ 19 ತಜ್ಞ ವೈದ್ಯರುಗಳಿಗೆ ಇತ್ತೀಚೆಗೆ ಸ್ಥಳ ನೇಮಕಾತಿ ನೀಡಲಾಗಿದೆ.

8) ಇದಲ್ಲದೇ ಗ್ರಾಮೀಣ ಪ್ರದೇಶದ ಸಾರ್ವಜನಿಕರಿಗೆ ತೊಂದರೆ ಆಗದಂತೆ 331 ಸಾಮಾನ್ಯ ಕರ್ತವ್ಯ ವೈದ್ಯಾಧಿಕಾರಿಗಳನ್ನು ನೇರ ನೇಮಕಾತಿ ಮುಖಾಂತರ ಖಾಯಂ ಅಗಿ ನೇಮಕಾತಿ ಮಾಡಲು ಕ್ರಮ ಕೈಗೊಳ್ಳಲಾಗಿದೆ.

9) ಪ್ರಸ್ತುತ 735ಕಿರಿಯ ಮಹಿಳಾ ಆರೋಗ್ಯ ಸಹಾಯಕಿಯರ ಹುದ್ದೆಗಳನ್ನು ವಿಶೇಷ ನೇಮಕಾತಿ ಸಮಿತಿ ಮೂಲಕ ಭರ್ತಿ ಮಾಡಲು ಅರ್ಜಿಗಳನ್ನು ಆಹ್ವಾನಿಸಿದ್ದು, ಆಯ್ಕೆ ಪ್ರಕ್ರಿಯೆಯು ಜಾರಿಯಲ್ಲಿದೆ. ಹಾಗೂ 314 ಕಿರಿಯ ಆರೋಗ್ಯ ಪುರುಷ ಸಹಾಯಕರ ಅಂತಿಮ ನೇಮಕಾತಿ ಪಟ್ಟಿಯನ್ನು ಪ್ರಕಟಿಸಲಾಗಿದೆ. ಶೀಘ್ರದಲ್ಲಿಯೇ ನೇಮಕಾತಿ ಆದೇಶ ಹೊರಡಿಸಲಾಗುವುದು.

10) ಕರ್ನಾಟಕ ಲೋಕಸೇವಾ ಆಯೋಗದಿಂದ ಪ್ರಸ್ತುತ 224 ಪ್ರಥಮ ದರ್ಜೆ ಸಹಾಯಕರ ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು ಕ್ರಮ ಕೈಗೊಳ್ಳಲಾಗಿ, ಆಯ್ಕೆಯಾದ 224 ಅಭ್ಯರ್ಥಿಗಳ ಪೈಕಿ ಇತ್ತೀಚೆಗೆ 210 ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡಲಾಗಿದೆ.

11) ಇಲಾಖೆಯಲ್ಲಿ ಒಟ್ಟು 13965 ಗ್ರೂಪ್-ಡಿ ನೌಕರರ ಹುದ್ದೆಗಳು ಮಂಜೂರಾಗಿದ್ದು, ಆ ಪೈಕಿ 4041 ಹುದ್ದೆಗಳು ಖಾಲಿಯಿವೆ. ಸದರಿ ಖಾಲಿ ಹುದ್ದೆಗಳ ಪೈಕಿ 2323 ಹುದ್ದೆಗಳನ್ನು ನೇರ ನೇಮಕಾತಿ ಮೂಲಕ ಭರ್ತಿ ಮಾಡಲು 1:2 ಅನುಪಾತದ ಆಕ್ಷೇಪಣೆ

ಸ್ವೀಕರಿಸಲು ಪಟ್ಟಿ ಪ್ರಕಟಿಸಲಾಗಿದೆ ನಿಯಮಾನುಸಾರ ಪರಿಶೀಲಿಸಿದ ನಂತರ ಕ್ರಮ ಕೈಗೊಳ್ಳಲಾಗುವುದು.

12) 450 ವಿವಿಧ ವೃಂದದ ಅರೆವೈದ್ಯಕೀಯ ಹುದ್ದೆಗಳನ್ನು ನೇಮಕಾತಿ ಮಾಡಲು ಕರಡು ಅಧಿಸೂಚನೆ ಹೊರಡಿಸಲು ಕ್ರಮ ಕೈಗೊಳ್ಳ ಲಾಗಿದೆ.

13) 318 ವಾಹನ ಚಾಲಕರ ಹುದ್ದೆಗಳನ್ನು ನೇಮಕಾತಿ ಮಾಡಲು ಸರ್ಕಾರ ಅನುಮೋದನೆ ನೀಡಿದ್ದು ಕರಡು ಅಧಿಸೂಚನೆ ಹೊರಡಿಸಲು ಕ್ರಮ ಕೈಗೊಳ್ಳಲಾಗಿದೆ.

ಗೃಹ ನಿರ್ಮಾಣ ಸಹಕಾರ ಸಂಘಗಳು

593 (476) ಶ್ರೀ ಎಂ. ಸತ್ಯನಾರಾಯಣ (ಚಾಮುಂಡೇಶ್ವರಿ) : ಮಾನ್ಯ ಮುಖ್ಯಮಂತ್ರಿಯವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ?

ಅ) ಕಾನೂನು ಬದ್ದವಾಗಿ ಮೈಸೂರು ಜಿಲ್ಲೆಯಲ್ಲಿ ಕಾರ್ಯನಿರ್ವಹಿ ಸುತ್ತಿರುವ ಗೃಹ ನಿರ್ಮಾಣ ಸಹಕಾರ ಸಂಘಗಳೆಷ್ಟು (ವಿಳಾಸ ಹಾಗೂ ನೋಂದಣಿಯಾದ ವರ್ಷಗಳ ಮಾಹಿತಿಯನ್ನು ನೀಡುವುದು)?

ಶ್ರೀ ಜಗದೀಶ್ ಶೆಟ್ಟರ್ (ಮುಖ್ಯಮಂತ್ರಿಯವರು) :

ಅ) ಮೈಸೂರು ಜಿಲ್ಲೆಯಲ್ಲಿ 182 ಗೃಹ ನಿರ್ಮಾಣ ಸಹಕಾರ ಸಂಘಗಳು ಕಾರ್ಯನಿರ್ವಹಿಸುತ್ತಿರುತ್ತವೆ. ಅವುಗಳ ವಿಳಾಸ ಹಾಗೂ ನೊಂದಣಿಯಾದ ವರ್ಷಗಳ ಮಾಹಿತಿಯನ್ನು ಈ ಕೂಡ ಲಗತ್ತಿಸಲಾಗಿದೆ.

ನಮೂನೆ

ಮೈಸೂರು ಜಿಲ್ಲೆಯಲ್ಲಿ ಕಾರ್ಯನಿರ್ವಹಿಸುತ್ತಿರುವ ಗೃಹ ನಿರ್ಮಾಣ ಸಹಕಾರ ಸಂಘಗಳು

ಕ್ರ ಸಂ.	ನೊಂದಣಿ ಕ್ರಮಾಂಕ ಮತ್ತು ದಿನಾಂಕ	ಗೃಹ ನಿರ್ಮಾಣ ಸಹಕಾರ ಸಂಘಗಳು
1	875:65–66:11–11–65	ದಕ್ಷಿಣ ರೈಲ್ವೆ ಲೋ.ಇನ್ ಕಂ ಗ್ರೂಪ್ ಗೃಹ ನಿರ್ಮಾಣ ಸಹಕಾರ ಸಂಘ ನಿ, ಮೈಸೂರು
2	937:96–97:4–11–66	ಮೈಸೂರು ಸಿಟಿ ಗೃಹ ನಿರ್ಮಾಣ ಸಹಕಾರ ಸಂಘ ನಿ, ಮೈಸೂರು
3	906:88–89:21–11–88	ಮೈಸೂರು ಪೋಸ್ಟಲ್ ನೌಕರರ ಗೃಹ ನಿರ್ಮಾಣ ಸಹಕಾರ ಸಂಘ ನಿ, ಮೈಸೂರು